**National**
**Kannada**
**16.03.2026 19.35 hrs**
**ಆಕಾಶವಾಣಿ, ಬೆಂಗಳೂರು**

# ರಾಷ್ಟ್ರೀಯ ವಾರ್ತೆಗಳು

**ಮುಖ್ಯಾಂಶಗಳು**

1. ಗುಜರಾತ್‌ನ ಮುಂದ್ರಾ ಬಂದರು ತಲುಪಿದ ಎಲ್‌ಪಿಜಿ ಹೊತ್ತ 'ಶಿವಾಲಿಕ್' ಹಡಗು
2. ಕೇಂದ್ರ ಸರ್ಕಾರದಿಂದ ತೈಲ ಮಾರುಕಟ್ಟೆ ಕಂಪನಿಗಳಿಗೆ 30 ಸಾವಿರ ಕೋಟಿ ರೂಪಾಯಿ ಪರಿಹಾರ – ಸಚಿವ ಸುರೇಶ್ ಗೋಪಿ
3. ಹನ್ನೊಂದು ರಾಜ್ಯಸಭಾ ಸ್ಥಾನಗಳ ಚುನಾವಣೆಯ ಮತ ಎಣಿಕೆ ಪ್ರಗತಿಯಲ್ಲಿ
4. ಅಮರೇಶ ನುಗಡೋಣಿ ಅವರ 'ದಡ ಸೇರಿಸು ತಂದೆ' ಕಥಾ ಸಂಕಲನಕ್ಕೆ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ

***************

ಎಲ್‌ಪಿಜಿ ಹೊತ್ತ ಶಿವಾಲಿಕ್ ಹಡಗು ಇಂದು ಸಂಜೆ ಗುಜರಾತ್‌ನ ಮುಂದ್ರಾ ಬಂದರನ್ನು ತಲುಪಿದೆ.

ಈ ಕುರಿತು ನವದೆಹಲಿಯಲ್ಲಿಂದು ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾಹಿತಿ ನೀಡಿದ ಬಂದರು, ಹಡಗು ಮತ್ತು ಜಲಮಾರ್ಗ ಸಚಿವಾಲಯದ ವಿಶೇಷ ಕಾರ್ಯದರ್ಶಿ ರಾಜೇಶ್ ಕುಮಾರ್ ಸಿನ್ಹಾ, ಎಲ್‌ಪಿಜಿ ಹೊತ್ತ ಮತ್ತೊಂದು ಭಾರತೀಯ ಹಡಗು ನಂದಾದೇವಿ ನಾಳೆ ಆಗಮಿಸಲಿದೆ. ಯುಎಇಯಿಂದ ಪ್ರಯಾಣ ಆರಂಭಿಸಿರುವ ಭಾರತದ ಧ್ವಜ ಹೊತ್ತ 'ಜಗ್ ಲಾಡ್‌ಕಿ' ಹಡಗು ಸುರಕ್ಷಿತವಾಗಿ ಭಾರತದತ್ತ ಸಾಗುತ್ತಿದೆ ಎಂದು ತಿಳಿಸಿದರು.

ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯದ ಜಂಟಿ ಕಾರ್ಯದರ್ಶಿ ಸುಜಾತ ಶರ್ಮಾ ಮಾತನಾಡಿ, ಕಚ್ಚಾ ತೈಲ ಸಾಕಷ್ಟು ಪ್ರಮಾಣದಲ್ಲಿ ಲಭ್ಯವಿದ್ದು, ದೇಶಾದ್ಯಂತ ಎಲ್ಲಾ ಸಂಸ್ಕರಣಾಗಾರಗಳು ತಮ್ಮ ಪೂರ್ಣ ಸಾಮರ್ಥ್ಯದಲ್ಲಿ ಕಾರ್ಯನಿರ್ವಹಿಸುತ್ತಿವೆ. ಪೆಟ್ರೋಲ್ ಬಂಕ್‌ಗಳು ಎಂದಿನಂತೆ ಕಾರ್ಯನಿರ್ವಹಿಸುತ್ತಿದ್ದು, ಎಲ್ಲಿಯೂ ತೈಲ ಕೊರತೆ ಕುರಿತು ವರದಿಯಾಗಿಲ್ಲ ಎಂದು ಹೇಳಿದರು.

***************

ಇರಾನ್‌ನಲ್ಲಿದ್ದ ಸುಮಾರು 550 ಭಾರತೀಯ ಪ್ರಜೆಗಳು ಭೂಗಡಿಯ ಮೂಲಕ ಅರ್ಮೇನಿಯಾ ಪ್ರವೇಶಿಸಿದ್ದಾರೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ತಿಳಿಸಿದ್ದಾರೆ.

ನವದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇರಾನ್‌ನಿಂದ 90 ಭಾರತೀಯ ಪ್ರಜೆಗಳು ಭೂ ಗಡಿಯ ಮೂಲಕ ಅಜಾರ್‌ಬೈಜಾನ್‌ಗೆ ತೆರಳಿದ್ದು, ತೆಹ್ರಾನ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿಯು ಈ ಪ್ರಯಾಣಕ್ಕೆ ವ್ಯವಸ್ಥೆ ಮಾಡಿದೆ ಎಂದು ಮಾಹಿತಿ ನೀಡಿದ್ದಾರೆ.

ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಜಂಟಿ ಕಾರ್ಯದರ್ಶಿ ಅಸೀಮ್ ಮಹಾಜನ್ ಮಾತನಾಡಿ, ಕಳೆದ ತಿಂಗಳ 28 ರಿಂದ ಪಶ್ಚಿಮ ಏಷ್ಯಾ ಪ್ರದೇಶದಿಂದ ಸುಮಾರು 2 ಲಕ್ಷ 20 ಸಾವಿರ ಪ್ರಯಾಣಿಕರು ಭಾರತಕ್ಕೆ ಮರಳಿದ್ದಾರೆ ಎಂದು ತಿಳಿಸಿದ್ದಾರೆ.

ಇರಾನ್‌ನಿಂದ ಇದುವರೆಗೆ 550 ಕ್ಕೂ ಹೆಚ್ಚು ಭಾರತೀಯರನ್ನು ಸುರಕ್ಷಿತವಾಗಿ ಸ್ಥಳಾಂತರಿಸಲು ಸಹಕರಿಸಿದ ಅರ್ಮೇನಿಯಾ ಸರ್ಕಾರ ಮತ್ತು ಅಲ್ಲಿನ ಜನತೆಗೆ ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್ ಜೈಶಂಕರ್ ಧನ್ಯವಾದ ಸಲ್ಲಿಸಿದ್ದಾರೆ.

***************

ಗ್ರಾಹಕರಿಗೆ ಕೈಗೆಟಕುವ ದರದಲ್ಲಿ ಎಲ್‌ಪಿಜಿ ಬೆಲೆಗಳನ್ನು ಖಚಿತಪಡಿಸಿಕೊಳ್ಳಲು 2025-26ರಲ್ಲಿ ತೈಲ ಮಾರುಕಟ್ಟೆ ಕಂಪನಿಗಳಿಗೆ 30 ಸಾವಿರ ಕೋಟಿ ರೂಪಾಯಿ ಪರಿಹಾರವನ್ನು ಕೇಂದ್ರ ಸರ್ಕಾರ ನೀಡಿದೆ ಎಂದು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಖಾತೆ ರಾಜ್ಯ ಸಚಿವ ಸುರೇಶ್ ಗೋಪಿ ತಿಳಿಸಿದ್ದಾರೆ.

ರಾಜ್ಯಸಭೆಯಲ್ಲಿಂದು ಪ್ರಶ್ನೆಯೊಂದಕ್ಕೆ ಲಿಖಿತ ಉತ್ತರ ನೀಡಿದ ಅವರು, 2022-23ರಲ್ಲಿ ಕೇಂದ್ರ ಸರ್ಕಾರ, ತೈಲ ಮಾರುಕಟ್ಟೆ ಕಂಪನಿಗಳಿಗೆ 22 ಸಾವಿರ ಕೋಟಿ ರೂಪಾಯಿ ಪರಿಹಾರ ನೀಡಿತ್ತು ಎಂದು ಹೇಳಿದರು.

ದೆಹಲಿಯಲ್ಲಿ ಪ್ರಸ್ತುತ 14.2 ಕೆ.ಜಿ ಗೃಹ ಬಳಕೆಯ ಎಲ್‌ಪಿಜಿ ಸಿಲಿಂಡರ್‌ನ ಚಿಲ್ಲರೆ ಮಾರಾಟ ಬೆಲೆ 913 ರೂಪಾಯಿ ಆಗಿದೆ. ಪ್ರಧಾನಮಂತ್ರಿ ಉಜ್ವಲ್ ಗ್ರಾಹಕ ಯೋಜನೆಗೆ ಪ್ರತಿ ಸಿಲಿಂಡರ್‌ಗೆ 300 ರೂಪಾಯಿಗಳ ಉದ್ದೇಶಿತ ಸಬ್ಸಿಡಿ ನಂತರ, ಸರ್ಕಾರ ಎಲ್ಲಾ ಅರ್ಹ ಫಲಾನುಭವಿಗಳಿಗೆ ಪ್ರತಿ ಸಿಲಿಂಡರ್‌ಗೆ 613 ರೂಪಾಯಿಗಳ ದರದಲ್ಲಿ ಸಿಲಿಂಡರ್‌ಗಳನ್ನು ಒದಗಿಸುತ್ತಿದೆ ಎಂದರು.

ದೇಶದಲ್ಲಿ 17 ಸಾವಿರಕ್ಕೂ ಹೆಚ್ಚು ಗ್ರಾಮೀಣ ಪ್ರದೇಶಗಳು ಸೇರಿದಂತೆ ಒಟ್ಟು 25 ಸಾವಿರ ಎಲ್‌ಪಿಜಿ ವಿತರಣಾ ಕೇಂದ್ರಗಳಿವೆ ಎಂದು ಸಚಿವ ಸುರೇಶ್ ಗೋಪಿ ಮಾಹಿತಿ ನೀಡಿದರು.

***************

ರಾಜ್ಯಸಭೆಯು 'ವಿನಿಯೋಗ ವಿಧೇಯಕ 2026' ಕುರಿತ ಚರ್ಚೆಯನ್ನು ಕೈಗೆತ್ತಿಕೊಂಡಿದೆ. ಈ ವಿಧೇಯಕವು 2025-26ರ ಹಣಕಾಸು ವರ್ಷದ ಸೇವೆಗಳಿಗಾಗಿ ಭಾರತದ ಸಂಚಿತ ನಿಧಿಯಿಂದ ನಿರ್ದಿಷ್ಟ ಮೊತ್ತವನ್ನು ಪಾವತಿಸಲು ಮತ್ತು ವಿನಿಯೋಗಿಸಲು ಅನುಮತಿ ಕೋರುತ್ತದೆ. ಲೋಕಸಭೆಯು ಕಳೆದ ವಾರವೇ ಈ ವಿಧೇಯಕವನ್ನು ಅಂಗೀಕರಿಸಿದೆ.

ಚರ್ಚೆಯನ್ನು ಆರಂಭಿಸಿದ ಕಾಂಗ್ರೆಸ್‌ನ ಶಕ್ತಿಸಿನ್ಹಾ ಗೋಹಿಲ್, ಪಶ್ಚಿಮ ಏಷ್ಯಾದಲ್ಲಿನ ಸಂಘರ್ಷ ಮತ್ತು ಹಾರ್ಮುಜ್ ಜಲಸಂಧಿ ಮುಚ್ಚಲ್ಪಟ್ಟಿರುವ ಹಿನ್ನೆಲೆಯಲ್ಲಿ ದೇಶದಲ್ಲಿ ಎಲ್‌ಪಿಜಿ ಪೂರೈಕೆಯ ಸಮಸ್ಯೆಯನ್ನು ಪ್ರಸ್ತಾಪಿಸಿದರು. ಅಲ್ಲದೆ, ನ್ಯಾನೋ ಯೂರಿಯಾ ಬಳಕೆಯನ್ನು ಕಡ್ಡಾಯಗೊಳಿಸುತ್ತಿರುವ ಬಗ್ಗೆಯೂ ಅವರು ಧ್ವನಿ ಎತ್ತಿದರು.

ರಸಗೊಬ್ಬರಗಳ ಜೊತೆಗೆ ನ್ಯಾನೋ ಯೂರಿಯಾವನ್ನು ಖರೀದಿಸುವಂತೆ ವಿತರಕರು ರೈತರ ಮೇಲೆ ಒತ್ತಡ ಹೇರುತ್ತಿದ್ದಾರೆ ಎಂದು ಅವರು ಆರೋಪಿಸಿದರು.

***************

ದೇಶದಲ್ಲಿ 2014 ರ ಏಪ್ರಿಲ್‌ನಿಂದ 296 ಗಿಗಾ ವ್ಯಾಟ್ ಹೆಚ್ಚುವರಿ ಉತ್ಪಾದನೆ ಮೂಲಕ ವಿದ್ಯುತ್ ಕೊರತೆಯ ನಿರ್ಣಾಯಕ ಸಮಸ್ಯೆಯನ್ನು ಪರಿಹರಿಸಿದೆ ಎಂದು ಕೇಂದ್ರ ವಿದ್ಯುತ್ ಖಾತೆ ರಾಜ್ಯ ಸಚಿವ ಶ್ರೀಪಾದ್ ನಾಯಕ್ ಹೇಳಿದ್ದಾರೆ.

ರಾಜ್ಯಸಭೆಯಲ್ಲಿ ಇಂದು ಪ್ರಶ್ನೆಯೊಂದಕ್ಕೆ ಲಿಖಿತ ಉತ್ತರ ನೀಡಿದ ನಾಯಕ್, ದೇಶದಲ್ಲಿ ಸಾಕಷ್ಟು ವಿದ್ಯುತ್ ಲಭ್ಯತೆ ಇದೆ ಮತ್ತು ಪ್ರಸ್ತುತ ಸ್ಥಾಪಿಸಲಾದ ವಿದ್ಯುತ್ ಉತ್ಪಾದನಾ ಸಾಮರ್ಥ್ಯ 520 ಗಿಗಾ ವ್ಯಾಟ್‌ಗಿಂತ ಹೆಚ್ಚಾಗಿದೆ ಎಂದರು.

ಇಲ್ಲಿಯವರೆಗೆ ನಾಲ್ಕು ಕೋಟಿ 55 ಲಕ್ಷ ಸ್ಮಾರ್ಟ್ ಮೀಟರ್‌ಗಳನ್ನು ಅಳವಡಿಸಲಾಗಿದೆ. ವಿವಿಧ ಯೋಜನೆಗಳ ಅಡಿಯಲ್ಲಿ ದೇಶಾದ್ಯಂತ ಒಟ್ಟಾರೆ ಐದು ಕೋಟಿ 97 ಲಕ್ಷ ಸ್ಮಾರ್ಟ್ ಮೀಟರ್‌ಗಳನ್ನು ಅಳವಡಿಸಲಾಗಿದೆ ಎಂದು ಸಚಿವ ಶ್ರೀಪಾದ್ ನಾಯಕ್ ತಿಳಿಸಿದರು.

***************

2019ರಲ್ಲಿ ಪ್ರಾರಂಭವಾದಾಗಿನಿಂದ 'ಜಲ ಜೀವನ್ ಮಿಷನ್' ಗಮನಾರ್ಹ ಪ್ರಗತಿ ಸಾಧಿಸಿದೆ. ಈ ಯೋಜನೆಯಡಿ ಇದುವರೆಗೆ 15 ಕೋಟಿ 83 ಲಕ್ಷಕ್ಕೂ ಹೆಚ್ಚು ಮನೆಗಳಿಗೆ ನಲ್ಲಿ ನೀರಿನ ಸಂಪರ್ಕ ಕಲ್ಪಿಸಲಾಗಿದೆ ಎಂದು ಕೇಂದ್ರ ಜಲಶಕ್ತಿ ಸಚಿವ ಸಿ.ಆರ್.ಪಾಟೀಲ್ ತಿಳಿಸಿದ್ದಾರೆ.

ರಾಜ್ಯಸಭೆಯಲ್ಲಿ ಪೂರಕ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಅವರು, 2019ರಲ್ಲಿ ಯೋಜನೆ ಆರಂಭವಾದಾಗ ಕೇವಲ 3.23 ಕೋಟಿ ಗ್ರಾಮೀಣ ಮನೆಗಳು ಮಾತ್ರ ನಲ್ಲಿ ಸಂಪರ್ಕ ಹೊಂದಿದ್ದವು. ಅಂದಿನಿಂದ ಈ ಸಂಖ್ಯೆಯು ಸುಮಾರು 15

ಕೋಟಿ 83 ಲಕ್ಷ ಕೋಟಿ ಮನೆಗಳಿಗೆ ಏರಿಕೆಯಾಗಿದೆ. ಮುಂದಿನ ಹಂತದಲ್ಲಿ ಇನ್ನು ಸುಮಾರು 3 ಕೋಟಿ ಸಂಪರ್ಕಗಳನ್ನು ಕಲ್ಪಿಸುವ ಗುರಿ ಹೊಂದಲಾಗಿದೆ ಎಂದು ಅವರು ಮಾಹಿತಿ ನೀಡಿದರು.

***************

ಬಿಹಾರ, ಒಡಿಶಾ ಮತ್ತು ಹರಿಯಾಣದ 11 ರಾಜ್ಯಸಭಾ ಸ್ಥಾನಗಳ ಚುನಾವಣೆಯ ಮತ ಎಣಿಕೆ ಕಾರ್ಯ ಪ್ರಗತಿಯಲ್ಲಿದೆ.

ಬಿಹಾರದ 5, ಒಡಿಶಾದ 4 ಮತ್ತು ಹರಿಯಾಣದ 2 ರಾಜ್ಯಸಭಾ ಸ್ಥಾನಗಳಿಗೆ ಮತದಾನ ನಡೆದಿದೆ. ಈಗಾಗಲೇ 26 ಅಭ್ಯರ್ಥಿಗಳು ಅವಿರೋಧವಾಗಿ ರಾಜ್ಯಸಭೆಗೆ ಆಯ್ಕೆಯಾಗಿದ್ದಾರೆ.

***************

ಬಿಜೆಪಿ ಇಂದು ಪಶ್ಚಿಮ ಬಂಗಾಳ ಮತ್ತು ಕೇರಳದ ವಿಧಾನಸಭಾ ಚುನಾವಣೆಗಾಗಿ ಅಭ್ಯರ್ಥಿಗಳ ಮೊದಲ ಪಟ್ಟಿಯನ್ನು ಬಿಡುಗಡೆ ಮಾಡಿದೆ.

ಪಶ್ಚಿಮ ಬಂಗಾಳದಲ್ಲಿ, ವಿಧಾನಸಭೆಯ ವಿರೋಧ ಪಕ್ಷದ ನಾಯಕ ಸುವೇಂದು ಅಧಿಕಾರಿಯವರನ್ನು ನಂದಿಗ್ರಾಮ ಮತ್ತು ಭವಾನಿಪುರ ಕ್ಷೇತ್ರಗಳಿಂದ ಪಕ್ಷ ಕಣಕ್ಕಿಳಿಸಿದೆ.

ಕೇರಳದಲ್ಲಿ, ಕೇಂದ್ರ ಸಚಿವ ಜಾರ್ಜ್ ಕುರಿಯನ್, ಕಂಜಿರಪ್ಪಳ್ಳಿ ಕ್ಷೇತ್ರದಿಂದ ಸ್ಪರ್ಧಿಸಿದರೆ, ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಮಾಜಿ ಕೇಂದ್ರ ಸಚಿವ ರಾಜೀವ್ ಚಂದ್ರಶೇಖರ್, ನೇಮಮ್ ಕ್ಷೇತ್ರದಿಂದ ಸ್ಪರ್ಧಿಸಲಿದ್ದಾರೆ. ಮಾಜಿ ಕೇಂದ್ರ ಸಚಿವ ವಿ. ಮುರಳೀಧರನ್ ಅವರನ್ನು ಕಜಕೂಟಂ ಕ್ಷೇತ್ರದಿಂದ ಕಣಕ್ಕಿಳಿಸಲಾಗಿದೆ.

***************

2025ರ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಪ್ರಕಟಗೊಂಡಿದೆ. ಕನ್ನಡದ ಅಮರೇಶ ನುಗಡೋಣಿ ಅವರ 'ದಡ ಸೇರಿಸು ತಂದೆ' ಕಥಾ ಸಂಕಲನಕ್ಕೆ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಒಲಿದು ಬಂದಿದೆ.

ಕೊಂಕಣಿ ಸಾಹಿತಿ, ಪತ್ರಕರ್ತ ಮಂಗಳೂರಿನ ಹೆನ್ರಿ ಮೆಂಡೊನ್ಸಾ ಅವರ 'ರೂಪಾನಿ ಅನಿ ರೂಪಕಾಂ' ಸಾಹಿತ್ಯ ವಿಮರ್ಶೆ ಕೃತಿಗೆ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಲಭಿಸಿದೆ.

ಪ್ರಶಸ್ತಿ 1 ಲಕ್ಷ ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ ಸ್ಮರಣಿಕೆಯನ್ನು ಒಳಗೊಂಡಿರುತ್ತದೆ.

***************

ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಅವರು ಬ್ರಸೆಲ್ಸ್‌ನಲ್ಲಿ ಇಂದು ಬೆಲ್ಜಿಯಂ ಉಪ ಪ್ರಧಾನಿ ಮತ್ತು ವಿದೇಶಾಂಗ ವ್ಯವಹಾರಗಳ ಸಚಿವ ಮ್ಯಾಕ್ಸಿಮ್ ಪ್ರಿವೋಸ್ಟ್ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು.

ಭಾರತ-ಬೆಲ್ಜಿಯಂ ನಡುವೆ ವ್ಯಾಪಾರ ಮತ್ತು ಹೂಡಿಕೆ, ಸೆಮಿಕಂಡಕ್ಟರ್‌ಗಳು, ಆರೋಗ್ಯ, ತಂತ್ರಜ್ಞಾನ ಮತ್ತು ನಾವೀನ್ಯತೆ ಕ್ಷೇತ್ರಗಳಲ್ಲಿ ಸಹಕಾರ ಬಲಪಡಿಸುವ ಕುರಿತು ಉಭಯ ನಾಯಕರು ಚರ್ಚಿಸಿದರು.

ಈ ಮೂಲಕ ಎರಡೂ ದೇಶಗಳ ನಡುವೆ ಕಾರ್ಯತಂತ್ರದ ಸಂವಾದ ಸ್ಥಾಪಿಸಲು ಎರಡೂ ಕಡೆಯವರು ಸಮ್ಮತಿಸಿದ್ದಾರೆ ಎಂದು ಸಾಮಾಜಿಕ ಜಾಲತಾಣದಲ್ಲಿ ಡಾ.ಎಸ್.ಜೈಶಂಕರ್ ತಿಳಿಸಿದ್ದಾರೆ.

***************

ಜೈವಿಕ ವೈವಿಧ್ಯತೆಯ ಸಮಾವೇಶಕ್ಕೆ ಭಾರತ ತನ್ನ ಏಳನೇ ರಾಷ್ಟ್ರೀಯ ವರದಿಯನ್ನು ಸಲ್ಲಿಸಿದೆ. ಸಂರಕ್ಷಣೆ, ಪುನಃಸ್ಥಾಪನೆ, ಸುಸ್ಥಿರ ಬಳಕೆ, ಆಡಳಿತ ಸುಧಾರಣೆ, ಹವಾಮಾನ ತಡೆಗಟ್ಟುವಿಕೆ ಮತ್ತು ಸಮುದಾಯದ ಭಾಗವಹಿಸುವಿಕೆಯಲ್ಲಿನ ಪ್ರಗತಿಯನ್ನು ಈ ವರದಿಯು ಪ್ರತಿಬಿಂಬಿಸುತ್ತದೆ ಎಂದು ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯ ತಿಳಿಸಿದೆ.

*******ಮುಕ್ತಾಯ********